ಕರ್ನಾಟಕ ಸರ್ಕಾರ

***ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.***

ಸಂಖ್ಯೆ: ಪಪೂಶಿಇ/ಶೈಶಾ-04/ತರಬೇತಿ-01/2014-15 ದಿನಾಂಕ:30.01.2015

**ಜ್ಞಾಪನ**

ವಿಷಯ: ದಿನಾಂಕ: 08.01.2015 ರಿಂದ 11.01.2015 ರವರೆಗೆ ನಡೆಯುವ ತರಬೇತಿ ಕಾರ್ಯಕ್ರಮಕ್ಕೆ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಾಣಿಜ್ಯಶಾಸ್ತ್ರ ವಿಷಯದ ಉಪನ್ಯಾಸಕರುಗಳನ್ನು ನಿಯೋಜಿಸುವ ಬಗ್ಗೆ.

ಉಲ್ಲೇಖ:ಸರ್ಕಾರದ ಆದೇಶ ಸಂಖ್ಯೆ: ಇಡಿ 103 ಯೋಯೋಕ 2014, ದಿ:25.04.2014

*******

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಮೈಸೂರು ವಿಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಾಣಿಜ್ಯಶಾಸ್ತ್ರ ವಿಷಯದ ಉಪನ್ಯಾಸಕರುಗಳಿಗೆ ಶ್ರೀ ಜೆ.ಎಸ್.ಎಸ್ ಮಹಿಳಾ ಪದವಿ ಪೂರ್ವ ಕಾಲೇಜು, ಸರಸ್ವತಿಪುರಂ, ಮೈಸೂರು ಇಲ್ಲಿ ದಿನಾಂಕ: 08.01.2015 ರಿಂದ 11.01.2015 ರವರೆಗೆ 4 ದಿನಗಳ ತರಬೇತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಈ ತರಬೇತಿ ಕಾರ್ಯಕ್ರಮಕ್ಕೆ ಮೈಸೂರು ವಿಭಾಗದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ವಾಣಿಜ್ಯಶಾಸ್ತ್ರ ವಿಷಯದ ಉಪನ್ಯಾಸಕರುಗಳನ್ನು ನಿಯೋಜಿಸಿ ಆದೇಶಿಸಲಾಗಿದೆ.

- ತರಬೇತಿ ಕಾರ್ಯಕ್ರಮಕ್ಕೆ ನಿಯೋಜನೆಯಾಗಿರುವ ಉಪನ್ಯಾಸಕರನ್ನು ಕರ್ತವ್ಯದಿಂದ ಬಿಡುಗಡೆ ಮಾಡಲು ಸಂಬಂಧಿಸಿದ ಪ್ರಾಂಶುಪಾಲರುಗಳಿಗೆ ಈ ಮೂಲಕ ಸೂಚಿಸಲಾಗಿದೆ.
- ಕಾರ್ಯಕ್ರಮದಲ್ಲಿ ಭಾಗವಹಿಸುವ ಉಪನ್ಯಾಸಕರು ಕಾಲೇಜಿನ ಪ್ರಾಂಶುಪಾಲರಿಂದ ಕಾಲೇಜಿನ ಕರ್ತವ್ಯದಿಂದ ಬಿಡುಗಡೆ ಮಾಡಿಸಿಕೊಂಡು ಬಿಡುಗಡೆ ಪತ್ರವನ್ನು ತರುವುದು.
- ನಿಯೋಜಿಸಲ್ಪಟ್ಟ ಉಪನ್ಯಾಸಕರುಗಳು ತಪ್ಪದೇ ದಿನಾಂಕ: 08.01.2015 ಬೆಳಿಗ್ಗೆ 9 ಗಂಟೆಗೆ ಶ್ರೀ ಜೆ.ಎಸ್.ಎಸ್ ಮಹಿಳಾ ಪದವಿ ಪೂರ್ವ ಕಾಲೇಜು, ಸರಸ್ವತಿಪುರಂ, ಮೈಸೂರು ಇಲ್ಲಿ ವರದಿ ಮಾಡಿಕೊಳ್ಳುವುದು.
- ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸುವ ಉಪನ್ಯಾಸಕರು ಪ್ರಥಮ ಹಾಗೂ ದ್ವಿತೀಯ ಪಿಯುಸಿ ವಾಣಿಜ್ಯಶಾಸ್ತ್ರ ಪಠ್ಯಪುಸ್ತಕಗಳನ್ನು ಕಡ್ಡಾಯವಾಗಿ ತರುವುದು.
- ತರಬೇತಿಗೆ ನಿಯೋಜನೆಗೊಂಡ ಶಿಭಿರಾರ್ಥಿಗಳು KCSR ನಿಯಮಾನುಸಾರ ಪ್ರಯಾಣ ಭತ್ಯೆ ಮತ್ತು ದಿನ ಭತ್ಯೆಯನ್ನು ಪಡೆಯಲು ಅರ್ಹರಿರುತ್ತಾರೆ.
- **ತರಬೇತಿಗೆ ಗೈರು ಹಾಜರಾಗುವ ಉಪನ್ಯಾಸಕರುಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗುವುದು.**
- ಹೆಚ್ಚಿನ ಮಾಹಿತಿಗೆ ಶ್ರೀ ಕೆ.ಎಂ.ಪುಟ್ಟು, ಉಪನಿರ್ದೇಶಕರು ಮೈಸೂರು, ದೂರವಾಣಿ ಸಂಖ್ಯೆ- 9448448834, 08212440371, **ಶ್ರೀ.ಮಂಜುನಾಥ್ ಭಟ್** ತರಬೇತಿ ಸಂಯೋಜಕರು ದೂರವಾಣಿ ಸಂಖ್ಯೆ-9448900822 ಇವರುಗಳನ್ನು ಸಂಪರ್ಕಿಸಬಹುದು.

**(ಮಾನ್ಯ ನಿರ್ದೇಶಕರಿಂದ ಅನುಮೋದಿಸಲ್ಪಟ್ಟಿದೆ)**

ಜಂಟಿ ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಗಳು:**

1. ಉಪನಿರ್ದೇಶಕರು ಮೈಸೂರು, ಚಾಮರಾಜನಗರ, ಚಿಕ್ಕಮಗಳೂರು, ಹಾಸನ, ಮಡಿಕೇರಿ, ಮಂಡ್ಯ, ದಕ್ಷಿಣ ಕನ್ನಡ, ಉಡುಪಿ, ತರಬೇತಿಗೆ ನಿಯೋಜಿಸಲ್ಪಟ್ಟ ಉಪನ್ಯಾಸಕರನ್ನು ಕಡ್ಡಾಯವಾಗಿ ತರಬೇತಿಗೆ ಹಾಜರಾಗಲು ಸೂಕ್ತ ಕ್ರಮಕ್ಕಾಗಿ.
2. ನಿರ್ದೇಶಕರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರುಗಳ ಆಪ್ತಶಾಖೆಗೆ.
4. ತರಬೇತಿಗೆ ನಿಯೋಜಿಸಲ್ಪಟ್ಟ ಉಪನ್ಯಾಸಕರಿಗೆ.
5. ಲೆಕ್ಕಾಧಿಕಾರಿಗಳು, ಲೆಕ್ಕಪತ್ರ ಶಾಖೆ, ಪದವಿ ಪೂರ್ವ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು.
6. ಇ-ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ ನಿರ್ದೇಶನಾಲಯ, ಬೆಂಗಳೂರು.